Akashvani : Bangalore
National Bulletins In Kannada
12.10.2025 : 7.35 AM
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಪ್ರಧಾನಿ ನರೇಂದ್ರ ಮೋದಿ - ಭಾರತಕ್ಕೆ ಅಮೆರಿಕದ ನಿಯೋಜಿತ ರಾಯಭಾರಿ ಸೆರ್ಗಿಯೊ ಗಾರ್ ಭೇಟಿ ; ಭಾರತ-ಅಮೆರಿಕ ಸಂಬಂಧ ಬಲವರ್ಧನೆಗೆ ಒತ್ತು

೨. ಭಾರತ - ಪ್ರಜಾಪ್ರಭುತ್ವ, ಸಮಾನತೆಗೆ ಜೀವಂತ ಉದಾಹರಣೆ ; ಲೋಕಸಭಾಧ್ಯಕ್ಷ ಓಂ ಬಿರ್ಲಾ

೩. ಶಾಲೆಗಳು ಪ್ರವೇಶ ಮತ್ತು ಪರೀಕ್ಷಾ ಶುಲ್ಕವನ್ನು ಸಂಗ್ರಹಿಸಲು ಯುಪಿಐ ಅಳವಡಿಸಿಕೊಳ್ಳುವಂತೆ ಕೇಂದ್ರ ಶಿಕ್ಷಣ ಸಚಿವಾಲಯ ಕರೆ

೪. ಟೆಸ್ಟ್ ಕ್ರಿಕೆಟ್; ಭಾರತದ ವಿರುದ್ಧದ ಎರಡನೇ ಪಂದ್ಯದ ೩ನೇ ದಿನದಾಟದಲ್ಲಿಂದು ಮೊದಲ ಇನ್ನಿಂಗ್ಸ್ ಮುಂದುವರಿಸಲಿರುವ ವೆಸ್ಟ್ ಇಂಡೀಸ್

><><><><

ಪ್ರಧಾನಿ ನರೇಂದ್ರ ಮೋದಿ ಅವರು ನಿನ್ನೆ ನವದೆಹಲಿಯಲ್ಲಿರುವ ತಮ್ಮ ನಿವಾಸದಲ್ಲಿ ಭಾರತಕ್ಕೆ ಅಮೆರಿಕದ ನಿಯೋಜಿತ ರಾಯಭಾರಿ ಸೆರ್ಗಿಯೊ ಗಾರ್ ಅವರನ್ನು ಬರಮಾಡಿಕೊಂಡರು. ರಾಯಭಾರಿ ಗಾರ್ ಅವರ ಅಧಿಕಾರಾವಧಿಯು ಭಾರತ-ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆಯನ್ನು ಮತ್ತಷ್ಟು ಬಲಪಡಿಸುತ್ತದೆ ಎಂದು ಪ್ರಧಾನಿ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ನವದೆಹಲಿಯಲ್ಲಿ ಭಾರತಕ್ಕೆ ಅಮೆರಿಕದ ರಾಯಭಾರಿ ಸೆರ್ಗಿಯೊ ಗೋರ್ ಅವರೊಂದಿಗೆ ಭಾರತ-ಅಮೆರಿಕ ಸಂಬಂಧ ಮತ್ತು ಅದರ ಜಾಗತಿಕ ಮಹತ್ವದ ಕುರಿತು ಚರ್ಚಿಸಿದರು. ಸಾಮಾಜಿಕ

ಮಾಧ್ಯಮ ಪೋಸ್ಟ್‌ನಲ್ಲಿ, ಡಾ. ಜೈಶಂಕರ್, ತಮ್ಮ ಹೊಸ ಜವಾಬ್ದಾರಿಗೆ ಸೆರ್ಗಿಯೋ ಗಾರ್ ಅವರಿಗೆ ಶುಭ ಹಾರೈಸಿದ್ದಾರೆ. ಇದಕ್ಕೂ ಮುನ್ನ, ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ನಿಯೋಜಿತ ಅಮೆರಿಕದ ರಾಯಭಾರಿಯವರನ್ನು ಭೇಟಿಯಾದರು. ಭಾರತ-ಅಮೆರಿಕ ಸಮಗ್ರ ಜಾಗತಿಕ ಕಾರ್ಯತಂತ್ರದ ಪಾಲುದಾರಿಕೆ ಮತ್ತು ಅದರ ಹಂಚಿಕೆಯ ಆದ್ಯತೆಗಳ ಕುರಿತು ಅವರು ವಿಚಾರ ವಿನಿಮಯವನ್ನು ಮಾಡಿಕೊಂಡಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ರಾಯಭಾರಿ ಸರ್ಗಿಯೋ ಗಾರ್, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರೊಂದಿಗೆ ಮಾತುಕತೆ ನಡೆಸಿದರು. ಅಮೆರಿಕ ಮತ್ತು ಭಾರತ ಮುಕ್ತ ಇಂಡೋ-ಪೆಸಿಫಿಕ್ ಪ್ರದೇಶದ ಧ್ಯೇಯವನ್ನು ಮುನ್ನಡೆಸಲು ಬದ್ಧವಾಗಿವೆ ಎಂದು ಗಾರ್ ಹೇಳಿದ್ದಾರೆ. ನವದೆಹಲಿಯಲ್ಲಿ ನಡೆದ ಸರಣಿ ಸಭೆಗಳ ನಂತರ, ಭಾರತಕ್ಕೆ ಅಮೆರಿಕದ ನಿಯೋಜಿತ ರಾಯಭಾರಿ ಹೇಳಿಕೆ ಬಿಡುಗಡೆ ಮಾಡಿ, ಅಮೆರಿಕವು ಭಾರತದೊಂದಿಗಿನ ಸಂಬಂಧವನ್ನು ಗೌರವಿಸುತ್ತದೆ ಮತ್ತು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತು ಪ್ರಧಾನಿ ನರೇಂದ್ರ ಮೋದಿಯವರ ಬಲಿಷ್ಠ ನಾಯಕತ್ವದಲ್ಲಿ, ಎರಡೂ ರಾಷ್ಟ್ರಗಳು ಮುಂದೆ ಉತ್ತಮ ದಿನಗಳನ್ನು ಕಾಣಲಿವೆ ಎಂದು ಹೇಳಿದರು.

><><><><

ಪ್ರಧಾನಿ ನರೇಂದ್ರ ಮೋದಿ ನಿನ್ನೆ ನವದೆಹಲಿಯಲ್ಲಿ ಆಂಥ್ರೊಪಿಕ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡೇರಿಯೊ ಅಮೋಡೆ ಅವರನ್ನು ಭೇಟಿಯಾದರು. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಪ್ರಧಾನಿ ಆಂಥ್ರೊಪಿಕ್‌ನ ವಿಸ್ತರಣೆಯನ್ನು ಸ್ವಾಗತಿಸಿದರು ಮತ್ತು ಪ್ರಮುಖ ವಲಯಗಳಲ್ಲಿ ಬೆಳವಣಿಗೆಗೆ ಕೃತಕ ಬುದ್ಧಿಮತ್ತೆ ಅನ್ನು ಬಳಸಿಕೊಳ್ಳಲು ಒಟ್ಟಾಗಿ ಕೆಲಸ ಮಾಡಲು ಎದುರು ನೋಡುತ್ತಿದಾಗಿ ತಿಳಿಸಿದರು. ಭಾರತದ ತಾಂತ್ರಿಕ ಪರಿಸರ ವ್ಯವಸ್ಥೆ ಮತ್ತು ಪ್ರತಿಭಾನ್ವಿತ ಯುವಕರು ಮಾನವ ಕೇಂದ್ರಿತ ಮತ್ತು ಜವಾಬ್ದಾರಿಯುತ ಎಐ ನಾವೀನ್ಯತೆಯನ್ನು ಮುನ್ನಡೆಸುತ್ತಿದ್ದಾರೆ ಎಂದು ಅವರು ಹೇಳಿದ್ದಾರೆ.

><><><><

ಭಾರತ ಪ್ರಜಾಪ್ರಭುತ್ವ ಮತ್ತು ಸಮಾನತೆಗೆ ಜೀವಂತ ಉದಾಹರಣೆಯಾಗಿದ್ದು, ಕಳೆದ ೭೫ ವ?ಗಳಿಂದ ಸಂವಿಧಾನವು ಅದರ ಮಾರ್ಗದರ್ಶಕ ದೀಪವಾಗಿದೆ ಎಂದು ಲೋಕಸಭಾ ಸ್ಪೀಕರ್ ಓಂ

ಬಿರ್ಲಾ ಹೇಳಿದ್ದಾರೆ.  ಬಾರ್ಬಡೋಸ್‌ನಲ್ಲಿ ನಡೆದ ೬೮ ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದಲ್ಲಿ ಅವರು, ಪ್ರಜಾಪ್ರಭುತ್ವವು ಭಾರತದ ಆತ್ಮ, ಸಮಾನತೆಯೇ ಸಂಕಲ್ಪ ಮತ್ತು ನ್ಯಾಯವೇ ಅದರ ಗುರುತು ಎಂದು ಅವರು ಪ್ರತಿಪಾದಿಸಿದ್ದಾರೆ. ೬೮ ನೇ ಕಾಮನ್‌ವೆಲ್ತ್ ಸಂಸದೀಯ ಸಮ್ಮೇಳನದ ಸಾಮಾನ್ಯ ಸಭೆಯಲ್ಲಿ "ಕಾಮನ್‌ವೆಲ್ತ್ - ಜಾಗತಿಕ ಪಾಲುದಾರ" ಎಂಬ ವಿ?ಯದ ಕುರಿತು ಪ್ರತಿನಿಧಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ, ಅವರು  ಕಾಮನ್‌ವೆಲ್ತ್ ಸಂಸತ್ತಿನ ಅಧ್ಯಕ್ಷರನ್ನು ಜನವರಿ ೭ ರಿಂದ ೯ ರವೆಗೆ , ೨೦೨೬ ರಲ್ಲಿ ನವದೆಹಲಿಯಲ್ಲಿ ನಡೆಯಲಿರುವ ಮುಂದಿನ ಕಾಮನ್‌ವೆಲ್ತ್ ಸ್ಪೀಕರ್‌ಗಳು ಮತ್ತು ಅಧ್ಯಕ್ಷರ ಸಮ್ಮೇಳನದಲ್ಲಿ ಭಾಗವಹಿಸಲು ಆಹ್ವಾನಿಸಿದರು.

><><><><

ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಾದ್ಯಂತದ ಶಾಲೆಗಳು ಪ್ರವೇಶ ಮತ್ತು ಪರೀಕ್ಷಾ ಶುಲ್ಕವನ್ನು ಸಂಗ್ರಹಿಸಲು ಏಕೀಕೃತ ಪಾವತಿ ವ್ಯವಸ್ಥೆ ಯುಪಿಐ ಅನ್ನು ಅಳವಡಿಸಿಕೊಳ್ಳುವಂತೆ ಕೇಂದ್ರ ಶಿಕ್ಷಣ ಸಚಿವಾಲಯ ಕರೆ ನೀಡಿದೆ. ಈ ಕ್ರಮ ಆಡಳಿತಾತ್ಮಕ ಪ್ರಕ್ರಿಯೆಗಳನ್ನು ಆಧುನೀಕರಿಸುವುದು ಹಾಗೂ ಪೋಷಕರು ಮತ್ತು ವಿದ್ಯಾರ್ಥಿಗಳ ಅನುಕೂಲವನ್ನು ಹೆಚ್ಚಿಸುವ ಗುರಿಯನ್ನು ಹೊಂದಿದೆ. ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಓಅಇಖಖಿ, ಅಃSಇ, ಏಗಿS ಮತ್ತು ಓಗಿS ನಂತಹ ಸ್ವಾಯತ್ತ ಸಂಸ್ಥೆಗಳನ್ನು ಉದ್ದೇಶಿಸಿ ಬರೆದ ಪತ್ರದಲ್ಲಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಶಾಲೆಗಳಲ್ಲಿ ಹಣಕಾಸು ವಹಿವಾಟುಗಳನ್ನು ಸುಗಮಗೊಳಿಸಲು ಯುಪಿಐ, ಮೊಬೈಲ್ ವ್ಯಾಲೆಟ್‌ಗಳು ಮತ್ತು ನೆಟ್ ಬ್ಯಾಂಕಿಂಗ್‌ನಂತಹ ಡಿಜಿಟಲ್ ಪಾವತಿ ವೇದಿಕೆಗಳನ್ನು ಬಳಸಿಕೊಳ್ಳುವುದನ್ನು ಒತ್ತಿ ಹೇಳಲಾಗಿದೆ.  ಶಾಸಕಾಂಗ, ನೀತಿ ಮತ್ತು ಸಾಂಸ್ಥಿಕ ಸುಧಾರಣೆಗಳ ಮೂಲಕ 'ಜೀವನ ಮತ್ತು ಶಾಲಾ ಶಿಕ್ಷಣವನ್ನು ಸುಲಭಗೊಳಿಸುವುದನ್ನು ಉತ್ತೇಜಿಸುವ ಪ್ರಯತ್ನಗಳ ಭಾಗವಾಗಿದೆ. ಡಿಜಿಟಲ್ ಪಾವತಿ ವ್ಯವಸ್ಥೆಗಳ ಅಳವಡಿಕೆಯು ಹೆಚ್ಚಿನ ಅನುಕೂಲತೆ, ಪಾರದರ್ಶಕತೆ ಮತ್ತು ಪೋಷಕರು ಶಾಲೆಗಳಿಗೆ ಭೇಟಿ ನೀಡದೆ ಪಾವತಿಗಳನ್ನು ಮಾಡುವ ಸಾಮರ್ಥ್ಯ ಸೇರಿದಂತೆ ಹಲವು ಪ್ರಯೋಜನಗಳನ್ನು ತರುತ್ತದೆ ಎಂದು ನಿರೀಕ್ಷಿಸಲಾಗಿದೆ.  ಡಿಜಿಟಲ್ ವಹಿವಾಟುಗಳೊಂದಿಗೆ ಪರಿಚಿತರಾಗುವ ಮೂಲಕ, ಡಿಜಿಟಲ್

ಸಶಕ್ತಗೊಂಡ ಮತ್ತು ಅಂತರ್ಗತ ಶಿಕ್ಷಣ ವ್ಯವಸ್ಥೆಯ ದೃಷ್ಟಿಕೋನಕ್ಕೆ ಅನುಗುಣವಾಗಿ ಪಾಲುದಾರರಲ್ಲಿ ಆರ್ಥಿಕ ಸಾಕ್ಷರತೆಯನ್ನು ಬೆಳೆಸಲು ಈ ಉಪಕ್ರಮವು ಪ್ರಯತ್ನಿಸುತ್ತದೆ.

ನಗದು ಆಧಾರಿತ ಪಾವತಿಗಳಿಂದ ಡಿಜಿಟಲ್ ಪಾವತಿಗಳಿಗೆ ಪರಿವರ್ತನೆಗೊಳ್ಳುವುದರಿಂದ ಶಾಲಾ ಆಡಳಿತವನ್ನು ಆಧುನೀಕರಿಸುತ್ತದೆ ಮತ್ತು ೨೦೪೭ ರ ವೇಳೆಗೆ ನಾಗರಿಕ ಕೇಂದ್ರಿತ, ಡಿಜಿಟಲ್ ಆಗಿ ಮುಂದುವರಿದ ರಾಷ್ಟ್ರವಾದ ವಿಕಸಿತ ಭಾರತವನ್ನು ಸಾಧಿಸುವ ಸರ್ಕಾರದ ಗುರಿಯನ್ನು ಬೆಂಬಲಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಶಾಲೆಗಳಲ್ಲಿ ಸುರಕ್ಷಿತ ಮತ್ತು ಪಾರದರ್ಶಕ ಡಿಜಿಟಲ್ ಪಾವತಿ ವ್ಯವಸ್ಥೆಗಳನ್ನು ಸುಗಮಗೊಳಿಸಲು ಕಾರ್ಯವಿಧಾನಗಳನ್ನು ಜಾರಿಗೆ ತರಲು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಪ್ರೋತ್ಸಾಹಿಸಲಾಗಿದೆ, ಇದು ಆಧುನೀಕೃತ ಶಿಕ್ಷಣ ಪರಿಸರ ವ್ಯವಸ್ಥೆಯತ್ತ ಗಮನಾರ್ಹ ಹೆಜ್ಜೆಯಾಗಿದೆ.

><><><><

ಒಂದು ವಾರದ ರಾಜತಾಂತ್ರಿಕ ಭೇಟಿಗಾಗಿ ಭಾರತ ಪ್ರವಾಸದಲ್ಲಿರುವ ಅಫ್ಘಾನ್ ವಿದೇಶಾಂಗ ಸಚಿವ ಮೌಲವಿ ಅಮೀರ್ ಖಾನ್ ಮುತ್ತಕಿ ಇಂದು ಆಗ್ರಾದಲ್ಲಿರುವ ತಾಜ್ ಮಹಲ್‌ಗೆ ಭೇಟಿ ನೀಡಲಿದ್ದಾರೆ. ನಂತರ ಅವರು ನವದೆಹಲಿಯಲ್ಲಿ ವಾಣಿಜ್ಯ ಮಂಡಳಿ ಆಯೋಜಿಸಿರುವ ಉದ್ಯಮ ಮತ್ತು ವ್ಯಾಪಾರ ಪ್ರತಿನಿಧಿಗಳೊಂದಿಗೆ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಸಚಿವ ಮುತ್ತಕಿ, ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರೊಂದಿಗೆ ಪ್ರತ್ಯೇಕ ಸಭೆಯನ್ನು ಸಹ ನಡೆಸುವ ಸಾಧ್ಯತೆ ಇದೆ. ಈ ಸಭೆಯಲ್ಲಿ ಭದ್ರತೆ, ಭಯೋತ್ಪಾದನಾ ನಿಗ್ರಹ, ಮಾನವೀಯ ನೆರವು ಮತ್ತು ಅಫ್ಘಾನ್ ವಿದ್ಯಾರ್ಥಿಗಳು ಮತ್ತು ಉದ್ಯಮಿಗಳಿಗೆ ವೀಸಾಗಳಿಗೆ ಸಂಬಂಧಿಸಿದ ವಿ?ಯಗಳ ಬಗ್ಗೆ ಚರ್ಚಿಸುವ ಸಾಧ್ಯತೆಯಿದೆ.

><><><><

ಉಗ್ರವಾದದ ವಿರುದ್ಧ ಭಾರತದ ದೀರ್ಘಕಾಲದ ಹೋರಾಟದ ನಡುವೆ, ಒಂದು ಮಹತ್ವದ ಬೆಳವಣಿಗೆಯಲ್ಲಿ, ದಕ್ಷಿಣ ಬಸ್ತಾರ್‌ನ ದಂತೇವಾಡ ಜಿಲ್ಲೆಯ ಭದ್ರತಾ ಪಡೆಗಳು ಆರು ಶಂಕಿತ ಮಾವೋವಾದಿಗಳನ್ನು ಬಂಧಿಸಿ, ಮಂಗಾನರ್ ರಸ್ತೆಯ ಬಳಿ ಇರಿಸಲಾಗಿದ್ದ ಸುಧಾರಿತ ಸ್ಫೋಟಕ

ಸಾಧನವನ್ನು ಸುರಕ್ಷಿತವಾಗಿ ನಿಷ್ಕ್ರಿಯಗೊಳಿಸಿವೆ. ನಿನ್ನೆ ನಡೆಸಲಾದ ಈ ಕಾರ್ಯಾಚರಣೆಯು, ಈ ಪ್ರದೇಶದಲ್ಲಿ ಮಾವೋವಾದಿಗಳ ಪ್ರಭಾವವನ್ನು ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಮಂಗಾನರ್ ರಸ್ತೆಯ ಬಳಿ ಅನುಮಾನಾಸ್ಪದ ವ್ಯಕ್ತಿಗಳ ಬಗ್ಗೆ ಗುಪ್ತಚರ ಮಾಹಿತಿಯ ಮೇರೆಗೆ, ಬರ್ಸೂರ್ ಪೊಲೀಸ್ ಠಾಣೆ, ಜಿಲ್ಲಾ ಮೀಸಲು ಭದ್ರತಾ ಪಡೆ ಮತ್ತು ಕೇಂದ್ರ ಮೀಸಲು ಪೊಲೀಸ್ ಪಡೆ ಸಿಬ್ಬಂದಿಯನ್ನು ಒಳಗೊಂಡ ಜಂಟಿ ಉಪ ಪೊಲೀಸ್ ವರಿ?ಧಿಕಾರಿ ನೇತೃತ್ವದ ತಂಡ ಕ್ಷಿಪ್ರ ಕಾರ್ಯಾಚರಣೆಯನ್ನು ನಡೆಸಿದೆ.

><><><><

ನವದೆಹಲಿಯ ಅರುಣ್ ಜೇಟ್ಲಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ-ವೆಸ್ಟ್ ಇಂಡೀಸ್ ನಡುವಿನ ಟೆಸ್ಟ್ ಸರಣಿಯ ಎರಡನೇ ಹಾಗೂ ಅಂತಿಮ ಪಂದ್ಯದ ೩ನೇ ದಿನದಾಟದಲ್ಲಿಂದು ವೆಸ್ಟ್ ಇಂಡೀಸ್ ತನ್ನ ಮೊದಲ ಇನ್ನಿಂಗ್ಸ್ ಅನ್ನು ಮುಂದುವರಿಸಲಿದೆ. ಪಂದ್ಯ ಬೆಳಿಗ್ಗೆ ೯:೩೦ ಕ್ಕೆ ಆರಂಭವಾಗಲಿದೆ. ಪ್ರಸ್ತುತ ವೆಸ್ಟ್ ಇಂಡೀಸ್ ೩೭೮ ರನ್‌ಗಳ ಹಿನ್ನಡೆಯಲ್ಲಿದೆ. ೨ನೇ ದಿನದಾಟದ ಅಂತ್ಯಕ್ಕೆ ವೆಸ್ಟ್ ಇಂಡೀಸ್ ೪ ವಿಕೆಟ್ ನಷ್ಟಕ್ಕೆ ೧೪೦ ರನ್‌ಗಳಿಸಿದ್ದು, ಶೈ ಹೋಪ್ ಮತ್ತು ಟೆವಿನ್ ಇಮ್ಲಾಚ್ ಕಣದಲ್ಲಿದ್ದರು. ದಿನದ ಆರಂಭದಲ್ಲಿ, ಭಾರತದ ಯಶಸ್ವಿ ಜೈಸ್ವಾಲ್ ಮತ್ತು ನಾಯಕ ಶುಭ್‌ಮನ್ ಗಿಲ್ ಅದ್ಭುತ ಶತಕಗಳನ್ನು ಗಳಿಸುವುದರೊಂದಿಗೆ ಭಾರತ ೫ ವಿಕೆಟ್‌ಗೆ ೫೧೮ ರನ್‌ಗಳೊಂದಿಗೆ ಇನ್ನಿಂಗ್ಸ್ ಡಿಕ್ಲೇರ್ ಘೋಷಿಸಿತು.

><><><><

ವಿಶಾಖಪಟ್ಟಣಂನ ಎಸಿಎ-ವಿಡಿಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಮಹಿಳಾ ಏಕದಿನ ಕ್ರಿಕೆಟ್ ವಿಶ್ವಕಪ್ ಪಂದ್ಯದಲ್ಲಿ ಭಾರತದ ವನಿತೆಯರ ತಂಡ, ಆಸ್ಟ್ರೇಲಿಯಾವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಕಳೆದ ರಾತ್ರಿ, ಕೊಲಂಬೊದ ಆರ್. ಪ್ರೇಮದಾಸ ಕ್ರೀಡಾಂಗಣದಲ್ಲಿ ನಡೆದ ಪಂದ್ಯದಲ್ಲಿ ಇಂಗ್ಲೆಂಡ್, ಶ್ರೀಲಂಕಾವನ್ನು ೮೯ ರನ್‌ಗಳಿಂದ ಸೋಲಿಸಿ ಟೂರ್ನಿಯಲ್ಲಿ ಸತತ ಮೂರನೇ ಗೆಲುವು ದಾಖಲಿಸಿತು.

><><><><

ನಾರ್ವೆಯ ಫೋರ್ಡ್‌ನಲ್ಲಿ ನಡೆದ ೨೦೨೫ ರ ವಿಶ್ವ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್‌ನ ಅಂತಿಮ ದಿನದಂದು ಭಾರತದ ಲವ್‌ಪ್ರೀತ್ ಸಿಂಗ್ ಪುರುಷರ ೧೧೦ ಕೆಜಿ ಪ್ಲಸ್ ವಿಭಾಗದಲ್ಲಿ ಎಂಟನೇ ಸ್ಥಾನ ಪಡೆದರು. ಪ್ಯಾರಿಸ್ ೨೦೨೪ ರ ಒಲಿಂಪಿಕ್ಸ್ ಬೆಳ್ಳಿ ಪದಕ ವಿಜೇತ ಅರ್ಮೇನಿಯಾದ ವರಜ್‌ದತ್ ಲಲಾಯನ್ ಒಟ್ಟು ೪೬೧ ಕೆಜಿ ಎತ್ತುವ ಮೂಲಕ ಚಿನ್ನದ ಪದಕ ಗೆದ್ದರು. ಎರಡು ಬಾರಿ ಒಲಿಂಪಿಕ್ ಪದಕ ವಿಜೇತ ಬಹ್ರೇನ್‌ನ ಗೋರ್ ಮಿನಾಸ್ಯಾನ್ ಒಟ್ಟು ೪೪೭ ಕೆಜಿ ಎತ್ತುವ ಮೂಲಕ ಬೆಳ್ಳಿ ಗೆದ್ದರೆ, ಕೊರಿಯಾ ಗಣರಾಜ್ಯದ ಯೊಂಗ್ವಾನ್ ಸಾಂಗ್ ೪೧೦ ಕೆಜಿ ಎತ್ತುವ ಮೂಲಕ ಕಂಚಿನ ಪದಕ ಗೆದ್ದರು. ೨೦೨೫ ರ ವಿಶ್ವ ವೇಟ್‌ಲಿಫ್ಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ ಮೀರಾಬಾಯಿ ಚಾನು, ಮಹಿಳೆಯರ ೪೮ ಕೆಜಿ ವಿಭಾಗದಲ್ಲಿ ಬೆಳ್ಳಿ ಗೆದ್ದು ಭಾರತಕ್ಕೆ ಏಕೈಕ ಪದಕ ತಂದು ಕೊಟ್ಟರು.

**><><><><**